## ರಾಮನಗರ ಶಾಸಕ ಇಕ್ಬಾಲ್ ಹುಸೇನ್‌ಗೆ ಹೃದಯಾಘಾತ, ಆಸ್ಪತ್ರೆಗೆ ದಾಖಲು

ಬೆಂಗಳೂರು: ರಾಮನಗರದ ಶಾಸಕ ಇಕ್ಬಾಲ್ ಹುಸೇನ್ ಅವ-ರಿಗೆ ಹೃದಯಾಘಾತವಾಗಿದ್ದು, ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.



ನಿನ್ನೆ ಎಂದಿನಂತೆ ಕ್ಷೇತ್ರದಲ್ಲಿ ವಿವಿಧ ಕಾರ್ಯಕ್ರಮಗಳಲ್ಲಿ ತೊಡಗಿಸಿಕೊಂಡಿದ್ದರು. ಬಳಿಕ ಸಂಜೆ ವೇಳೆಗೆ ಮನೆಗೆ ಮರಳಿದ್ದರು. ತಡರಾತ್ರಿ ಎದೆ ನೋವು ಕಾಣಿಸಿಕೊಂಡಿತ್ತು. ಕುಟುಂಬದ ಸದಸ್ಯರು, ಆಪ್ತ ಸಹಾಯಕರು ಕೂಡಲೇ ಅವರನ್ನು ಬೆಂಗಳೂರಿನ ಖಾಸಗಿ ಆಸ್ಪತ್ರೆಗೆ ದಾಖಲಿಸಿದ್ದರು. ತುರ್ತು ಚಿಕಿತೆ?ಸ ನೀಡಿದ್ದ ವೈದ್ಯರು, ಸ್ಟಂಟ್ ಅಳವಡಿಸಿದ್ದಾರೆ. ಶಾಸಕರ ಆರೋಗ್ಯದಲ್ಲಿ ಚೇತರಿಕೆ ಕಂಡಿದೆ ಎಂದು ಮೂಲಗಳು ತಿಳಿಸಿವೆ. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮಾಜಿ ಸಂಸದ ಡಿ.ಕೆ.ಸುರೇಶ್ ಇಂದು ಆಸ್ಪತ್ರೆಗೆ ಭೇಟಿ ನೀಡಿ ಶಾಸಕರ ಆರೋಗ್ಯ ವಿಚಾರಿಸಿದ್ದಾರೆ.ಇಕ್ಬಾಲ್ ಹುಸೇನ್, ಡಿ.ಕೆ.ಶಿವಕುಮಾರ್ ಅವರ ಪರಮಾಪ್ತ ಬಳಗದಲ್ಲಿ ಗುರುತಿಸಿಕೊಂಡಿದ್ದಾರೆ. ಅಧಿಕಾರ ಹಂಚಿಕೆಗೂ ಮುನ್ನ ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗಬೇಕು, ಹಾಗೇ ಆಗುತ್ತಾರೆ ಎಂದು ಇಕ್ಬಾಲ್ ಹುಸೇನ್ ಹಲವಾರು ಬಾರಿ ವಕಾಲತು ವಹಿಸಿದ್ದರು. ಕೆಪಿಸಿಸಿಯಿಂದ ನೋಟಿಸ್ ನೀಡಿದ ಹೊರತಾಗಿಯೂ ಹೇಳಿಕೆ ನೀಡುವುದನ್ನು ನಿಲ್ಲಿಸಿರಲಿಲ್ಲ. ಇತ್ತೀಚೆಗೆ ಡಿ.ಕೆ.ಶಿವಕುಮಾರ್ ಅವರು ಸ್ವಕ್ಷೇತ್ರ ಕನಕಪುರದಲ್ಲಿ ಕೃತಜ್ಞತೆ ಸಮರ್ಪಣಾ ಜಾಥಾ ನಡೆಸಿದಾಗ ಇಕ್ಬಾಲ್ ಹುಸೇನ್ ಜೊತೆಯಲ್ಲೇ ನಿಂತು ಜಾಥಾದಲ್ಲಿ ಭಾಗವಹಿಸಿದ್ದರು.

## ಸ್ಲೋವಾಕಿಯಾಗೆ ಭೇಟಿ ನೀಡಿದ ಮೊದಲ ಭಾರತೀಯ ಪ್ರಧಾನಿ ಮೋದಿ



ಬ್ರಾಟಿಸ್ಲಾವಾ: ಪ್ರಧಾನಿ ನರೇಂದ್ರ ಮೋದಿ ಅವರು ತಮ್ಮ ಎರಡು ರಾಷ್ಟ್ರಗಳ ಭೇಟಿಯ ಎರಡನೇ ಹಂತಕ್ಕಾಗಿ ಸ್ಲೋವಾಕಿಂ-ಯಾಕ್ಕೆ ಆಗಮಿಸಿದ್ದಾರೆ.ಅಲ್ಲಿ ಅವರು ಅಧ್ಯಕ್ಷ ಪೀಟರ್ ಪೆಲ್ಲೆಗ್ರಿನಿ ಮತ್ತು ಪ್ರಧಾನಿ ರಾಬರ್ಟ್ ಫಿಕೊ ಅವರೊಂದಿಗೆ ಮಾತುಕತೆ ನಡೆಸಲಿದ್ದಾರೆ ಮತ್ತು ವ್ಯಾಪಾರ ನಾಯಕರೊಂದಿಗೆ ಸಂವಾದ ನಡೆಸಲಿದ್ದಾರೆ. 1993ರಲ್ಲಿ ಸ್ಲೋವಾಕಿಯಾ ಸ್ವಾತಂತ್ರ್ಯ ಪಡೆದ ನಂತರ ಭೇಟಿ ನೀಡುತ್ತಿರುವ ಮೊದಲ ಭಾರತೀಯ ಪ್ರಧಾನಿ ಮೋದಿ ಅವರಾಗಿದ್ದಾರೆ.

ಸ್ಲೋವಾಕಿಯಾ ರಾಜಧಾನಿಯನ್ನು ತಲುಪಿದ ನಂತರ ಎಕ್ಸ್ ಮಾಡಿರುವ ಮೋದಿ, ಈ ಭೇಟಿ ಭಾರತ-ಸ್ಲೋವಾಕಿಯಾ ಸಂಬಂಧಗಳನ್ನು ಗಾಢವಾಗಿಸಲು ಮತ್ತು ಸಹಕಾರದ ಹೊಸ ಮಾರ್ಗಗಳನ್ನು ಅನ್ವೇಷಿಸಲು ಅವಕಾಶವನ್ನು ಒದಗಿಸುತ್ತದೆ. ಅಧ್ಯಕ್ಷ ಪೆಲ್ಲೆಗ್ರಿನಿ ಮತ್ತು ಪ್ರಧಾನಿ ಫಿಕೊ ಅವರೊಂದಿಗೆ ಉತ್ಪಾದಕ ಸಭೆಗಳನ್ನು ಎದುರು ನೋಡುತ್ತಿದ್ದೇನೆ ಎಂದು ಬರೆದುಕೊಂಡಿದ್ದಾರೆ. ಫ್ರಾನ್?ಸನಿಂದ ಎರಡು ದಿನಗಳ ಭೇಟಿಗಾಗಿ ಪ್ರಧಾನಿ ಬ್ರಾಟಿಸ್ಲಾವಾಕ್ಕೆ ಆಗಮಿಸಿದರು, ಅಲ್ಲಿ ಅವರು ನೈಸ್‌ನಲ್ಲಿ ಫ್ರೆಂಚ್ ಅಧ್ಯಕ್ಷ ಎಮ್ಮಾನುಯೆಲ್ ಮ್ಯಾಕ್ರನ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಿದರು.

## ಒಮನ್‌ನಲ್ಲಿ ಭಾರತೀಯ ಪ್ರಜೆ ಸಾವು

ದುಬೈ: ಒಮನ್‌ನ ಡುಕ್ಮ್ ಬಂದರಿಗೆ ಪ್ರಸ್ತುತ ಬಂದಿಳಿದಿರುವ ಹಡಗಿನಲ್ಲಿ ವೈದ್ಯಕೀಯ ತೊಂದರೆಗಳಿಂದಾಗಿ ಭಾರತೀಯ ಪ್ರಜೆಯೊಬ್ಬರು ಸಾವನ್ನಪ್ಪಿದ್ದಾರೆ ಎಂದು ಮಸ್ಕತ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿ ತಿಳಿಸಿದೆ ಮತ್ತು ಅವರ ದೇಹವನ್ನು ಮರಳಿ ತರಲು ಪ್ರಯತ್ನಗಳನ್ನು ಪ್ರಾರಂಭಿಸಲಾಗಿದೆ ಎಂದು ಹೇಳಿದೆ.



ಅವರ ಸಾವಿಗೆ ಕಾರಣವಾದ ವೈದ್ಯಕೀಯ ಪರಿಸ್ಥಿತಿಗಳ ವಿವರಗಳನ್ನು ರಾಯಭಾರ ಕಚೇರಿ ನೀಡಿಲ್ಲ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಭಾರತೀಯ ಮಿಷನ್, ದುರದೃಷ್ಟವಶಾತ್ ವೈದ್ಯಕೀಯ ಸ್ಥಿತಿಗಳಿಂದಾಗಿ ಪ್ರಾಣ ಕಳೆದುಕೊಂಡ ಭಾರತೀಯ ಪ್ರಜೆ ನಿಶಾಂತ್ ಉಯಿಥ-'ರ್ನಾಥನ್ ಅವರ ಕುಟುಂಬ ಸದಸ್ಯರು, ಹಡಗಿನ ಸಿಬ್ಬಂದಿ ಮತ್ತು ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ರಾಯಭಾರ ಕಚೇರಿ ನಿಕಟ ಸಂಪರ್ಕದಲ್ಲಿದೆ ಎಂದು ಹೇಳಿದೆ. ಅವರ ಮೃತದೇಹವನ್ನು ಆದಷ್ಟು ಬೇಗ ಇಳಿಸಲು ಮತ್ತು ಸ್ವದೇಶಕ್ಕೆ ಕಳುಹಿಸಲು ಪ್ರಯತ್ನಗಳು ನಡೆಯುತ್ತಿವೆ ಎಂದು ಅದು ಹೇಳಿದೆ. ಉಯಿರ್ಥನಾಥನ್ ವೈದ್ಯಕೀಯ ತೊಂದರೆಗಳಿಂದಾಗಿ ನಿಧನರಾದಾಗ ಎಂಟಿ ಸೆಲೆಸ್ಟಿಯಲ್ ಹಡಗಿನಲ್ಲಿದ್ದರು ಎಂದು ಮಿಷನ್ ದೃಢಪಡಿಸಿತ್ತು.ದುಃಖಿತ ಕುಟುಂಬಕ್ಕೆ ರಾಯಭಾರ ಕಚೇರಿ ತನ್ನ ಸಂತಾಪ ಸೂಚಿಸಿತು ಮತ್ತು ಹಡಗಿನ ನಿರ್ವಹಣಾ ಕಂಪನಿಯೊಂದಿಗೆ ನಿರಂತರ ಸಂಪರ್ಕದಲ್ಲಿದೆ ಎಂದು ಹೇಳಿದೆ. ಮೇ 20 ರಂದು, ಯುಎಸ್ ಸೆಂಟ್ರಲ್ ಕಮಾಂಡ್ ಹೇಳಿಕೆ ನೀಡಿ, ಹಾರ್ಮುಜ್ ಜಲಸಂಧಿಯ ಮೇಲಿನ ಅಮೆರಿಕದ ದಿಗ್ಬಂಧನವನ್ನು ಉಲ್ಲಂಘಿಸಲು ಶಂಕಿತ ಪ್ರಯತ್ನಕ್ಕಾಗಿ ಮೆ-ರೀನ್ ಗಳು ಎಂಟಿ ಸೆಲೆಸ್ಟಿಯಲ್ ಅನ್ನು ತಡೆದರು, ಆದ-'ರೆ ಶೋಧ ಕಾರ್ಯಾಚರಣೆಯ ನಂತರ ಅದನ್ನು ಬಿಡುಗಡೆ ಮಾಡಲಾಯಿತು. ಹಡಗಿನ ಸಿಬ್ಬಂದಿಗೆ ಅದರ ಮಾರ್ಗವನ್ನು ಬದಲಾಯಿಸಲು ಕೇಳಲಾಯಿತು.

**ಜನಶ್ರೀ ಟೈಮ್ಸ್**

**ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.**

# ಡಿ ಎಸ್ ಎಸ್ ವತಿಯಿಂದ ಕರ್ನಾಟಕ ದಲಿತ ಸಂಘರ್ಷ ಸಮಿತಿ ಸಂಸ್ಥಾಪಕ ಪ್ರೋ ಕೃಷ್ಣಪ್ಪನವರ ಜಯಂತೋತ್ಸವ

ನರಗುಂದ: ಕರ್ನಾಟಕ ದಲಿತ ಸಂಘರ್ಷ ಸಮಿತಿ ಸಂಸ್ಥಾಪಕರಾದ ಪ್ರೋ. ಬಿ.ಕೃಷ್ಣಪ್ಪನವರ ಜಯಂತೋತ್ಸವವನ್ನು ಡಿಎಸ್‌ಎಸ್ ತಾಲೂಕು ಸಂಘಟನೆ ವತಿಯಿಂದ ಪಟ್ಟಣದದಲ್ಲಿ ಇತ್ತೀಚೆಗೆ ಆಚರಿಸಲಾಯಿತು.

ಡಿಎಸ್‌ಎಸ್ ಸಂಘಟನೆಯ ತಾಲೂಕು ಸಂಚಾಲಕ ದತ್ತಾತ್ರೇಯ ಜೋಗಣ್ಣವರ ಮಾತನಾಡಿ, ದಲಿತ ಸಾಹಿತ್ಯ ಚಳುವಳಿಯ ಪ್ರವರ್ತಕರಲ್ಲಿ ಒಬ್ಬರಾದ ಪ್ರೊ. ಬಿ. ಕೃಷ್ಣಪ್ಪನವರು ಡಿಎಸ್‌ಎಸ್ ಸಂಘಟನೆಯ ಸಂಸ್ಥಾಪಕ ಅದ್ಯಕ್ಷರಾಗಿದ್ದರು. ಅವರ 87ನೇ ಜನ್ಮ ದಿನಾಚರಣೆ ಆಚರಿಸಲಾಗುತ್ತಿದೆ. ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರು ಭೋಧಿಸಿದ ಶಿಕ್ಷಣ, ಸಂಘಟನೆ, ಹೋರಾಟ ಚಳುವಳಿಯ ತತ್ವಗಳನ್ನು ನಾವೆಲ್ಲರೂ ಮೈಗೂಡಿಸಿಕೊಳ್ಳಬೇಕು. ಪ್ರೋ.



ಕೃಷ್ಣಪ್ಪನವರು ಸಮಾಜದಲ್ಲಿ ಸಮಾನತೆಗಾಗಿ ಹಗಲಿರುಳು ಹೋರಾಡಿದ್ದರೆ. ಶೋಷಿತ, ವಂಚಿತ ವರ್ಗದವರ ಉಳುಮೆಗೆ ಭೂಮಿ ಮತ್ತು ಸ್ವಂತ ಸೂರಿಗಾಗಿ ಹೋರಾಡಿದ್ದು ಅವಿಸ್ಮರಣೀಯ. ರೈತರು, ಕೂಲಿ ಕಾರ್ಮಿಕರು, ಬಡವರ ಪರವಾಗಿ ಅಪಾರವಾದ ಕಾಳಜಿ ಹೊಂದುವ ಮೂಲಕ ಪ್ರೋ.ಕೃಷ್ಣಪ್ಪನವರು ಜನಾನುರಾಗಿಯಾಗಿ ಬೆಳದು ಮಹಾನ್ ಮುತ್ಸದ್ದಿಯಾಗಿದ್ದರು.

ಅವರ ಆದರ್ಶಗಳನ್ನು ನಾವೆಲ್ಲ ಪಾಲಿಸುವ ಮೂಲಕ ದಲಿತರು, ಬಡವರ ಪರವಾಗಿ ಕೆಲಸಗಳನ್ನು ಮಾಡಬೇಕು ಎಂದು ತಿಳಿಸಿದರು. ಡಿಎಸ್‌ಎಸ್ ಮಹಿಳಾ ಒಕ್ಕೂಟದ ಸಂಚಾಲಕಿ ಶಾರದಾ ಹಳೇಮನಿ, ಗುರುನಾಥ ಕೆಂಗಾರಕರ ಮಾತನಾಡಿದರು.

ಸಂಜು ಜೋಗಣ್ಣವರ, ನವೀನ ಜೋಗಣ್ಣವರ, ಮುತ್ತು ಮಾದರ, ಬಸ್ಸು ದಂಡಾಪೂರ, ನೀಲಗಂಗಾ ಮಾದರ, ಬಸಮ್ಮ ಗುಡಿಕಾರ, ಸುಶೀಲ ನಾಗರಳ್ಳಿ, ಅನುಸೂಯಾ ಮಾದರ, ಪಕ್ಕೀರವ್ವ ಜೋಗಣ್ಣವರ, ಸುಮಿತ್ರಾ ತಳವಾರ, ಭಾರತಿ ಮಾದರ, ಮಹಾಂತೇಶ ಪೂಜಾರ, ವಿಕ್ರಂ ಹೊನಕೇರಿ, ವೆಂಕಟೇಶ ಖಾನಪೇಠ, ಕಿರಣ ಜೋಗಣ್ಣವರ, ಕಾಶೀನಾಥ, ಹನುಮಂತ ಶಿರಹಟ್ಟಿ, ರಾಜು ಲಮಾಣಿ, ಬಸ್ಸು ಜೋಗಣ್ಣವರ, ಉಪಸ್ಥಿತರಿದ್ದರು.

# ಭುವನೇಶ್ವರಿ ವಿಶೇಷ ಮಕ್ಕಳ ಶಾಲೆಯಲ್ಲಿ ಮಂಗಳಾ ಹಾದಿಮನಿ ಹುಟ್ಟುಹಬ್ಬ

ಗದಗ: ವಿಶ್ವ ಕಲ್ಯಾಣ ಗದಗ ಸಂಚಾಲಿತ ಭುವನೇಶ್ವರಿ ವಿಶೇಷ ಅಗತ್ಯವುಳ್ಳ ಮಕ್ಕಳ ಶಾಲೆಯಲ್ಲಿ ಶ್ರೀಮತಿ ಮಂಗಳಾ ಹಾದಿಮನಿ ಹುಟ್ಟುಹಬ್ಬವನ್ನು ಅರ್ಥಪೂರ್ಣವಾಗಿ ಆಚ-ರಿಸಿಕೊಂಡರು.

ಕಾರ್ಯಕ್ರಮದ ಮುಖ್ಯ ಆಥಿತಿಗಳಾಗಿ ಗಣ್ಯ ಉದ್ಯಮಿಗಳಾದ ಶ್ರೀ ರಾಜೇಶ ಹಾದಿಮನಿ ಮಾತನಾಡಿ, ಸಮಾಜದಲ್ಲಿ ಅವಕಾಶವಂಚಿತ ವಿಶೇಷ ಮಕ್ಕಳಿಗೆ ಸೂಕ್ತವಾದ ಅವಕಾಶಗಳನ್ನು ಕಲ್ಪಿಸಿ, ಅವರವರ ಸಾಮರ್ಥ್ಯಗೆ ತಕ್ಕಂತೆ ತರಬೇತಿ ನೀಡಿ, ಸಮಾಜದ ಮುಖ್ಯವಾಹಿನಿಗೆ ತರುತ್ತಿರುವ ಸಂಸ್ಥೆಯ ಸೇವಾ ಕಾರ್ಯ ಶ್ಲಾಘನೀಯವಾಗಿದೆ. ನಿಸ್ವಾರ್ಥ ಸೇವೆ ಮಾಡುತ್ತಿರುವ ಈ ಸಂಸ್ಥೆಗೆ ನನ್ನ ಸಹಾಯ ನೀಡುವುದರೊಂದಿಗೆ ಹಾಗೂ ಎಲ್ಲ ದಾನಿಗಳಿಂದ ಸಹಾಯ-ಸಹಕಾರ ಕೊಡಿಸುವುದಾಗಿ ಹೇಳಿದರು.

ಕಾರ್ಯಕ್ರಮದಲ್ಲಿ ಶ್ರೀಮತಿ ಮಂಗಳಾ ಹಾದಿಮನಿಯವರು ಮಾತನಾಡಿ, ದೇವರು ಯಾವ ದೇವಸ್ಥಾನದಲ್ಲಿಲ್ಲ ಇಲ್ಲಿಯೇ ಇದ್ದಾನೆ. ದಿವ್ಯಾಂಗರಲ್ಲಿ ಅದ್ಭುತವಾದ ಶಕ್ತಿ ಇರುತ್ತದೆ.



ಅವರನ್ನು ವೈಜ್ಞಾನಿಕವಾಗಿ ಶಿಕ್ಷಣ ಹಾಗೂ ತರಬೇತಿ ನೀಡಿ, ಸಮಾಜದಲ್ಲಿ ಸ್ವಾವಲಂಬಿ ಜೀವನವನ್ನು ನಡೆಸುವ ಹಾಗೆ ಮಾಡಿ, ಅವರಲ್ಲಿ ಸೂಪ್ತವಾದ ಶಕ್ತಿಯನ್ನು ಹೊರತರುವ ಈ ಸೇವಾ ಕಾರ್ಯ, ದೇವರು ಮೆಚ್ಚುವಂತಹದ್ದು, ಇಂದು ನನ್ನ ಹುಟ್ಟುಹಬ್ಬವನ್ನು ಸ್ವರ್ಗದಲ್ಲಿಯೇ ಆಚ-'ರಿಸಿಕೊಂಡಷ್ಟು ಸಂತೋಷವಾಗಿದೆ. ದೇವರ ಸ್ವರೂಪಿಗಳಾದ ಈ ಮಕ್ಕಳ ಆಶೀರ್ವಾದ ನಮಗೆ ದೊರೆತ್ತಿದ್ದರಿಂದ ನಮ್ಮೆಲ್ಲ ಕಷ್ಟಗಳು ಇಂದಿಗೆ ದೂರವಾದವೆಂದು ಭಾವುಕರಾಗಿ ಹೇಳುತ್ತಾ, ಈ ಸೇವಾ ಕಾರ್ಯಕ್ಕೆ ನಿರಂತರವಾಗಿ ಸಹಾಯ-ಸಹಕಾರ ನೀಡುವುದಾಗಿ ಹೇಳಿದರು.

ಸಂಸ್ಥೆಯ ಅಧ್ಯಕ್ಷ ರಾಜ್ಯ ಪ್ರಶಸ್ತಿ ಪುರಸ್ಕೃತರಾದ ಮಂಜುನಾಥ ಹದ್ದಣ್ಣವರವರ ಪ್ರಾಸ್ತವಿಕವಾಗಿ ಮಾತನಾಡಿ, ತಮ್ಮ ಹುಟ್ಟುಹಬ್ಬದ ನಿಮಿತ್ಯ ದೇವರ ಸ್ವರೂಪಿಗಳಾದ ಈ ಮಕ್ಕಳಿಗೆ ಸಿಹಿಯೊಂದಿಗೆ ಊಟದ ವ್ಯವಸ್ಥೆ ಮಾಡಿ, ಎಲ್ಲ ರೀತಿಯ ಸಹಾಯ ಸಹಕಾರ ನೀಡುವುದಾಗಿ ಎಂದು ಹೇಳಿದ ಶ್ರೀಮತಿ ಮಂಗಳಾ ಹಾದಿಮನಿ ಹಾಗೂ ಕುಟುಂಬಸ್ಥರು ನಮ್ಮ ಸೇವಾ ಕಾರ್ಯಕ್ಕೆ ಬೆನ್ನಲುಬಾಗಿ ನಿಂತಿದ್ದಾರೆ. ಇವರಿಗೆ ಭಗವಂತ ಸಕಲ ಇಷ್ಟಾರ್ಥಗಳನ್ನು ಹಾಗೂ ಆಯುರ್ ಆರೋಗ್ಯವನ್ನು ಕರಣಿಸಲೆಂದು ಹಾರೈಸಿ, ಕೃತಜ್ಞತೆಗಳನ್ನು ಅರ್ಪಿಸಿದರು.

ಕಾರ್ಯಕ್ರಮದಲ್ಲಿ ದೀಪ ಬೆಳಗಿಸಿ, ಎಲ್ಲ ವಿಶೇಷ ಮಕ್ಕಳೊಂದಿಗೆ ಶ್ರೀಮತಿ ಮಂಗಳಾ ಹಾದಿಮನಿ ಹುಟ್ಟುಹಬ್ಬವನ್ನು ಕೇಕ್ ಕಟ್ ಮಾಡಿ, ಸಿಹಿಯೊಂದಿಗೆ ಊಟದ ವ್ಯವಸ್ಥೆ ಮಾಡುವುದರ ಮೂಲಕ ಅರ್ಥಪೂರ್ಣವಾಗಿ ಆಚರಿಸಿದರು. ಆರ್ಯನ್ ಹಾದಿಮನಿ, ಇಂದ್ರಮ್ಮಾ ದೊಡ್ಡಮನಿ, ನಾರಾಯಣ ದೊಡ್ಡಮನಿ, ವಿಶೇಷ ಮಕ್ಕಳು, ಸಿಬ್ಬಂದಿ ಹಾಗೂ ಪಾಲಕರು ಉಪಸ್ಥಿತರಿದ್ದರು, ಕೊನೆಗೆ ಎಲ್ಲರಿಗೂ ಸಿಹಿಯೊಂದಿಗೆ ಊಟವನ್ನು ಬಡಿಸಿದರು. ಆಗಮಿಸಿದೆಲ್ಲರೂ ವಿಶೇಷ ಮಕ್ಕಳಿಗೆ ಸಿಹಿಯೊಂದಿಗೆ ಊಟವನ್ನು ತಿನ್ನಿಸಿದ್ದು ತುಂಬಾ ವಿಶೇಷವಾಗಿತ್ತು.

# ನನ್ನ ಮೇಲೆ ಒತ್ತಡ ಹಾಕಿ 'ಕೇಸರಿ ಭಯೋತ್ಪಾದನೆ' ಎಂದು ಹೇಳಿಸಿತ್ತು ಕಾಂಗ್ರೆಸ್ ಹೈಕಮಾಂಡ್ : ಶಿಂಧೆ

ನವದೆಹಲಿ: ದೇಶದಲ್ಲಿ ಆರ್‌ಎಸ್‌ಎಸ್ ಮತ್ತು ಬಿಜೆಪಿಯವರು ಕೇಸರಿ ಭಯೋತ್ಪಾದನೆ ಹರಡುತ್ತಿದ್ದಾರೆ ಎಂದು ಹೇಳಿದ್ದ ಕೇಂದ್ರದ ಮಾಜಿ ಗೃಹಸಚಿವ ಸುಶೀಲ್‌ಕುಮಾರ್ ಶಿಂಧೆ ಈಗ ಉಲ್ಟಾ ಹೊಡೆದಿದ್ದಾರೆ.

ಇದು ನಾನು ವೈಯಕ್ತಿಕವಾಗಿ ನೀಡಿದ ಹೇಳಿಕೆಯಾಗಿರಲಿಲ್ಲ ಬದಲಿಗೆ ಕಾಂಗ್ರೆಸ್ ಪಕ್ಷ ನನ್ನ ಮೇಲೆ ಒತ್ತಡ ಹಾಕಿ ಬಿಜೆಪಿ ಮತ್ತು ಆರ್‌ಎಸ್‌ಎಸ್ ಬೆಂಬಲಿಗರು ದೇಶದಲ್ಲಿ ಕೇಸರಿ ಭಯೋತ್ಪಾದನೆ ಸೃಷ್ಟಿಸುತ್ತಿದ್ದಾರೆ ಎಂದು ನನ್ನ ಮೇಲೆ ಒತ್ತಡ ಹಾಕಿ ಹೇಳಿಸಿದ್ದರೂ ಎಂಬುದನ್ನು ಬಹಿರಂಗಪಡಿಸಿದ್ದಾರೆ. ತಮ ಆತಕಥೆಯಾದ ಸತಿ ಅನ್?ಸಸತಿ ಕೃತಿಯಲ್ಲಿ, 2013ರ ಜೈಪುರ ಚಿಂತನ ಶಿಬಿರದಲ್ಲಿ ತಾವು ನೀಡಿದ್ದ ಕೇಸರಿ ಭಯೋತ್ಪಾದನೆ ಕುರಿತ ಹೇಳಿಕೆಯ ಬಗ್ಗೆ ಸ್ಪಷ್ಟನೆ ನೀಡಿದ್ದಾರೆ.2013ರಲ್ಲಿ ಗೃಹ ಸಚಿವರಾಗಿದ್ದಾಗ, ಆರ್‌ಎಸ್‌ಎಸ್ ಮತ್ತು ಬಿಜೆಪಿಯವರು ದೇಶದಲ್ಲಿ ಕೇಸರಿ ಭಯೋತ್ಪಾದನೆಯನ್ನು ಹರಡುತ್ತಿದ್ದಾರೆ ಎಂಬ ಹೇಳಿಕೆಯನ್ನು ತಾವು ನೀಡಿದ್ದರು. ಆದರೆ ಇದು ಸ್ವಯಂಪ್ರೇರಿತವಾಗಿ ನೀಡಿದ ಹೇಳಿಕೆಯಾಗಿರಲಿಲ್ಲ ಎಂದು ಶಿಂಧೆ ಈಗ ಒಪ್ಪಿಕೊಂಡಿದ್ದಾರೆ.

ಆ ಸಂದರ್ಭದಲ್ಲಿ ಪಕ್ಷದ ನಾಯಕತ್ವವು ತಮಗೆ ನೀಡಿದ ನಿರ್ದೇಶನದ ಮೇರೆಗೆ ತಾವು ಆ ಹೇಳಿಕೆಯನ್ನು ನೀಡಬೇಕಾಯಿತು ಎಂದು ಶಿಂಧೆ ತಮ ಪುಸ್ತಕದಲ್ಲಿ ಬರೆದಿದ್ದಾರೆ. ಆ ಹೇಳಿಕೆಯನ್ನು ನೀಡಲು ತಮಗೆ ಇಷ್ಟವಿರಲಿಲ್ಲ ಎಂಬ ಸುಳಿವನ್ನು ಅವರು ತಮ ಆತಕಥೆಯಲ್ಲಿ ನೀಡಿದ್ದಾರೆ. ಸುಶೀಲ್‌ಕುಮಾರ್ ಶಿಂಧೆ ಸೇ-ರಿದಂತೆ ಕಾಂಗ್ರೆಸ್‌ನ ಕೆಲವು ನಾಯಕರು ಹಿಂದೂ ಸಂಘಟನೆಗಳ ಚಟುವಟಿಕೆಗಳನ್ನು ಉಲ್ಲೇಖಿಸಲು ಕೇಸರಿ ಭಯೋತ್ಪಾದನೆ ಅಥವಾ ಹಿಂದೂ ಭಯೋತ್ಪಾದನೆ ಎಂಬ ಪದಗಳನ್ನು ಬಳಸಿದ್ದರು. ಈ ಹೇಳಿಕೆಯು ನಂತರದ ದಿನಗಳಲ್ಲಿ ರಾಜಕೀಯವಾಗಿ ಭಾರೀ ವಿವಾದಕ್ಕೆ ಕಾರಣವಾಗಿತ್ತು ಮತ್ತು ಬಿಜೆಪಿ ಈ ವಿಚಾರವನ್ನು ಕಾಂಗ್ರೆಸ್ ವಿರುದ್ಧ ಅಸ್ತ್ರವನ್ನಾಗಿ ಬಳಸಿಕೊಂಡಿತ್ತು. ಸುಶೀಲ್‌ಕುಮಾರ್ ಶಿಂಧೆ ಅವರು ಸಂಘ ಪರಿವಾರ ಮತ್ತು ಬಿಜೆಪಿ ತಮ ಶಿಬಿರಗಳಲ್ಲಿ ಕೇಸರಿ ಭಯೋತ್ಪಾದನೆ



ಹರಡುತ್ತಿವೆ ಎಂದು ಆರೋಪಿಸಿದ್ದರು. ಇದು ಆ ಸಮಯದಲ್ಲಿ ಭಾರೀ ರಾಜಕೀಯ ವಿವಾದವನ್ನು ಸೃಷ್ಟಿಸಿತ್ತು. ಈ ಹೇಳಿಕೆಯು ಬಿಜೆಪಿ ಮತ್ತು ಆರ್‌ಎಸ್‌ಎಸ್‌ನಿಂದ ತೀವ್ರ ವಿರೋಧ ಎದುರಿಸಿತು. ತರುವಾಯ ಶಿಂಧೆ ಅವರು ತಮ ಹೇಳಿಕೆಯನ್ನು ಸಮರ್ಥಿಸಿಕೊಂಡಿದ್ದರೂ, ಅದು ರಾಜ-ಕೀಯವಾಗಿ ಬಹಳ ಚರ್ಚೆಗೊಳಗಾಯಿತು. ಕೇಸರಿ ಭಯೋತ್ಪಾದನೆ ಪದಬಳಕೆ ಮತ್ತು ಕಾಂಗ್ರೆಸ್ ಪಕ್ಷದ ಮೇಲಾದ ದುಷ್ಪರಿಣಾಮ ಭಾರತೀಯ ರಾಜಕೀಯ ಇತಿಹಾಸದಲ್ಲಿ ಕೇಸರಿ ಭಯೋತ್ಪಾದನೆ ಎಂಬ ಪದಗುಚ್ಛವು ಅತ್ಯಂತ ವಿವಾದಾತಕವಾಗಿ ಉಳಿದುಕೊಂಡಿದೆ. ಈ ಪದವು ಕೇವಲ ರಾಜಕೀಯ ಚರ್ಚೆಯಲ್ಲದೆ, ಒಂದು ದಶಕಕ್ಕೂ ಹೆಚ್ಚು ಕಾಲ ಕಾಂಗ್ರೆಸ್ ಪಕ್ಷದ ವರ್ಚಸ್ಸಿನ ಮೇಲೆ ಮತ್ತು ಮತ ಬ್ಯಾಂಕ್ ಮೇಲೆ ಗಂಭೀರ ಪರಿಣಾಮ ಬೀರಿದ ಅಂಶವಾಗಿದೆ. 2013ರ ಜನವರಿಯಲ್ಲಿ ಜೈಪುರದಲ್ಲಿ ನಡೆದ ಕಾಂಗ್ರೆಸ್‌ನ ಚಿಂತನ ಶಿಬಿರದಲ್ಲಿ, ಅಂದಿನ ಕೇಂದ್ರ ಗೃಹಸಚಿವ ಸುಶೀಲ್‌ಕುಮಾರ್ ಶಿಂಧೆ ಅವರು ಆರ್-ಎಸ್‌ಎಸ್ ಮತ್ತು ಬಿಜೆಪಿ ವಿರುದ್ಧ ಗಂಭೀರ ಆರೋಪ ಮಾಡಿದ್ದರು.

ಆರ್‌ಎಸ್‌ಎಸ್ ಮತ್ತು ಬಿಜೆಪಿ ತಮ ತರಬೇತಿ ಶಿಬಿರಗಳ ಮೂಲಕ ಕೇಸರಿ ಭಯೋತ್ಪಾದನೆಯನ್ನು ಉತ್ತೇಜಿಸುತ್ತಿವೆ. ದೇಶದಲ್ಲಿ ಕೋಮುಗಲಭೆಗಳನ್ನು ಪ್ರಚೋದಿಸುತ್ತಿವೆ ಎಂದು ಟೀಕಿಸಿದ್ದರು. ಆಗಿನ ಯುಪಿಎ ಸರ್ಕಾರವು ಮುಸ್ಲಿಂ ಮತದಾರರನ್ನು ಓಲೈಸಲು ಮತ್ತು ಆರ್‌ಎಸ್‌ಎಸ್ ಸಿದ್ಧಾಂತವನ್ನು ತೀವ್ರವಾಗಿ ವಿರೋಧಿಸಲು ಈ ಅಸ್ತ್ರವನ್ನು ಬಳಸಿಕೊಂಡಿತು ಎಂಬುದು ರಾಜಕೀಯ ವಿಶ್ಲೇಷಕರ ಅಭಿಪ್ರಾಯವಾಗಿತ್ತು.

**ಕಾಂಗ್ರೆಸ್‌ಗೆ ರಾಜಕೀಯ ಹೊಡೆತ**

ಈ ಹೇಳಿಕೆಯು ಕಾಂಗ್ರೆಸ್ ಪಕ್ಷಕ್ಕೆ ಹಲವಾರು ರೀತಿಯಲ್ಲಿ ಮುಳುವಾಯಿತು. ದೇಶದ ಬಹುಸಂಖ್ಯಾತ ಮತದಾರರಲ್ಲಿ, ಕಾಂಗ್ರೆಸ್ ಪಕ್ಷವು ಮತದಾರರ ಓಲೈಕೆ ಮಾಡುತ್ತಿದೆ ಮತ್ತು ಹಿಂದೂ ಧರ್ಮದ ವಿರುದ್ಧ ನಿಲುವು ಹೊಂದಿದೆ ಎಂಬ ಭಾವನೆ ಬಲಗೊಳ್ಳಲು ಇದು ಕಾರಣವಾಯಿತು.

**ಬಿಜೆಪಿಗೆ ಪ್ರಬಲ ಅಸ್ತ್ರ**

ಈ ಹೇಳಿಕೆಯನ್ನು ಬಿಜೆಪಿ ನಾಯಕರು ತೀವ್ರವಾಗಿ ಖಂಡಿಸಿದರು. ದೇಶಭಕ್ತಿಯ ಸಂಕೇತವಾದ ಕೇಸರಿಯನ್ನು ಭಯೋತ್ಪಾದನೆಗೆ ಹೋಲಿಸಿದ ಕಾಂಗ್ರೆಸ್‌ನ ನಡೆಯನ್ನು ಬಿಜೆಪಿ ರಾಷ್ಟ್ರೀಯ ಅವಮಾನ ಎಂದು ಬಿಂಬಿಸಿತು. ಇದು ನರೇಂದ್ರ ಮೋದಿಯವರ ನೇತೃತ್ವದಲ್ಲಿ ಬಿಜೆಪಿ ಸಂಘಟಿ-ತವಾಗಲು ದೊಡ್ಡ ಪ್ರೇರಣೆಯಾಯಿತು. ಆರ್-ಎಸ್‌ಎಸ್ ಮತ್ತು ಹಿಂದೂ ಸಂಘಟನೆಗಳು ಈ ವಿಷಯವನ್ನು ಜನಸಾಮಾನ್ಯರಲ್ಲಿ ತಮ ಅಸಿತೆಯ ಪ್ರಶ್ನೆಯಾಗಿ ತೆಗೆದುಕೊಂಡು ಹೋದವು. ಇದು ದೇಶಾದ್ಯಂತ ಕಾಂಗ್ರೆಸ್ ವಿರುದ್ಧದ ಆಕ್ರೋಶಕ್ಕೆ ನಾಂದಿ ಹಾಡಿತು.

**2014ರ ಲೋಕಸಭಾ ಚುನಾವಣೆ**

2014ರ ಚುನಾವಣೆಯಲ್ಲಿ ಕಾಂಗ್ರೆಸ್ ಅನುಭವಿಸಿದ ಹೀನಾಯ ಸೋಲಿಗೆ ಈ ಹೇಳಿಕೆಯು ಪರೋಕ್ಷವಾಗಿ ಕಾರಣವಾಯಿತು. ಹಿಂದೂ ಮತದಾರರ ಧ್ರುವೀಕರಣವು ಬಿಜೆಪಿಗೆ ಅನುಕೂಲಕರವಾಗಿ ಪರಿಣಮಿಸಿತು. ಸುಶೀಲ್‌ಕುಮಾರ್ ಶಿಂಧೆ ಅವರು ರಾಜ-ಕೀಯ ಗಿಮಿಕ್ ಆಗಿ ಬಳಸಿದ ಕೇಸರಿ ಭಯೋತ್ಪಾದನೆ ಎಂಬ ಪದವು ಕಾಂಗ್ರೆಸ್‌ಗೆ ಬೂಮರಾಂಗ್ ಆಗಿ ಪರಿಣಮಿಸಿತು. ಆಡಳಿತಾರೂಢ ಪಕ್ಷವಾಗಿದ್ದಾಗ ಆತುರದ ಮತ್ತು ತರ್ಕಬದ್ಧವಲ್ಲದ ಹೇಳಿಕೆಗಳು ಹೇಗೆ ಒಂದು ರಾಷ್ಟ್ರೀಯ ಪಕ್ಷದ ತಳಪಾಯವನ್ನು ಅಲುಗಾಡಿಸಬಹುದು ಎಂಬುದಕ್ಕೆ ಇದೊಂದು ಉದಾಹರಣೆಯಾಗಿದೆ. ಕಾಲಾನಂತರದಲ್ಲಿ ಕಾಂಗ್ರೆಸ್ ನಾಯಕರು ಈ ಪದ ಬಳಕೆ ಬಗ್ಗೆ ಅಂತರ ಕಾಯ್ದುಕೊಳ್ಳಲು ಪ್ರಯತ್ನಿಸಿದರೂ, ಸಾರ್ವಜನಿಕರ ಮನಸ್ಸಿನಲ್ಲಿ ಕಾಂಗ್ರೆಸ್ ಹಿಂದೂ ವಿರೋಧಿ ಎಂಬ ಬಿಂಬವು ಈ ಹೇಳಿಕೆಯಿಂದಾಗಿ ಆಳವಾಗಿ ಬೇರೂರಿತು.

**ರಾಜಕೀಯ ವಾಕ್ಸಮರ**

ಈ ಹೇಳಿಕೆಯು ಹೊರಬಿದ್ದ ನಂತರ ಬಿಜೆಪಿ ಮತ್ತು ಕಾಂಗ್ರೆಸ್ ನಡುವೆ ವಾಕ್ಸಮರ ನಡೆದಿತ್ತು. ಬಿಜೆಪಿ ನಾಯಕರು ಈ ಹೇಳಿಕೆಯನ್ನು ಆಧರಿಸಿ, ಕಾಂಗ್ರೆಸ್ ಪಕ್ಷವು ರಾಜಕೀಯ ಲಾಭಕ್ಕಾಗಿ ಮತ್ತು ಹಿಂದೂ ಧರ್ಮವನ್ನು ಅವಹೇಳನ ಮಾಡಲು ಸುಳ್ಳು ನಿರೂಪಣೆಗಳನ್ನು ಸೃಷ್ಟಿಸುತ್ತಿದೆ ಎಂದು ಟೀಕಿಸಿದ್ದರು. ವೋಟ್ ಬ್ಯಾಂಕ್ ರಾಜಕೀಯಕ್ಕಾಗಿ ಹಿಂದೂಗಳನ್ನು ಭಯೋತ್ಪಾದಕರಂತೆ ಬಿಂಬಿಸಲು ಕಾಂಗ್ರೆಸ್ ಪ್ರಯತ್ನಿಸಿತು ಎಂದು ಬಿಜೆಪಿ ಆರೋಪಿಸಿತ್ತು.ಈ ಹೇಳಿಕೆಯು ಪಕ್ಷಕ್ಕೆ ಉಂಟು ಮಾಡಿದ ಹಾನಿಯನ್ನು ಅರಿತ ನಂತರ ಇತ್ತೀಚಿನ ವರ್ಷಗಳಲ್ಲಿ ಕಾಂಗ್ರೆಸ್ ತನ್ನ ನಿಲುವನ್ನು ಬದಲಿಸಿಕೊಳ್ಳಲು ಪ್ರಯತ್ನಿಸುತ್ತಿದೆ. ನಾಯಕರು ಹಿಂದೂ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸುವುದು ಮತ್ತು ಮೃದು ಹಿಂದುತ್ವದ ಪಥವನ್ನು ಅನುಸ-ರಿಸುವ ಮೂಲಕ ಈ ಹಿಂದಿನ ಹಾನಿಯನ್ನು ಸರಿಪಡಿಸಲು ಯತ್ನಿಸುತ್ತಿದೆ.

"JANASHREE TIMES" Kannada daily morning Owner, Published by ANANDAYYA DANAYYA VIRAKTAMATH Address: 229/1, 3 RD CROSS VIVEKANAND NAGAR NEAR WATER TANK, GADAG, KARNATAKA - 582101. Printed at: SHIVANI PRINTERS Printers. Address: AT: HULKOTI T/D: GADAG OFFICE ADDERS: SHIVANI PRINTERS NEW COURT OPPSITE PLOT NO 28 RS NO 312/3B GARAG COMPLEX, GADAG, KARNATAKA - 582101. email: janashreetimes@gmail.com